# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 198 |
| ಸದಸ್ಯರ ಹೆಸರು | : | ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 13.09.2022 |
| ಉತ್ತರಿಸುವವರು | : | ಗಣಿ ಮತ್ತು ಭೂವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 5 ವರ್ಷಗಳಲ್ಲಿ, ರಾಜ್ಯದಲ್ಲಿ ವಿವಿಧ ಖನಿಜ/ಉಪಖನಿಜಗಳ ಗಣಿಗಾರಿಕೆಗಾಗಿ ಎಷ್ಟು ಗಣಿ, ಕಲ್ಲುಗಣಿ ಗುತ್ತಿಗೆಗಳನ್ನು ಎಷ್ಟು ವಿಸ್ತೀರ್ಣದ ಪ್ರದೇಶದಲ್ಲಿ ಮಂಜೂರು ಮಾಡಲಾಗಿದೆ; ಯಾವ ವಿಧಾನಗಳ ಮೂಲಕ ಈ ಲೈಸೆನ್ಸ್ ಗಳನ್ನು ಮಂಜೂರು ಮಾಡಲಾಗುತ್ತದೆ; (ವಿವರಗಳೊಂದಿಗೆ ಮಾಹಿತಿ ನೀಡುವುದು) | ರಾಜ್ಯದಲ್ಲಿ ಕಳೆದ 05 ವರ್ಷಗಳಲ್ಲಿ ಮುಖ್ಯ ಖನಿಜ ಗಣಿಗಾರಿಕೆಗಾಗಿ 18 ಗಣಿ ಗುತ್ತಿಗೆಗಳನ್ನು 4200.00 ಎಕರೆ ಪ್ರದೇಶದಲ್ಲಿ ಮತ್ತು ನಿರ್ಧಿಷ್ಟ ಉಪಖನಿಜ ಗಣಿಗಾರಿಕೆಗಾಗಿ 171 ಕಲ್ಲುಗಣಿ ಗುತ್ತಿಗೆಗಳನ್ನು 746.26 ಎಕರೆ ಪ್ರದೇಶದಲ್ಲಿ ಮತ್ತು ನಿರ್ಧಿಷ್ಟವಲ್ಲದ ಉಪಖನಿಜ ಗಣಿಗಾರಿಕೆಗಾಗಿ 1456 ಕಲ್ಲುಗಣಿ ಗುತ್ತಿಗೆಗಳನ್ನು 5058.31 ಎಕರೆ ಪ್ರದೇಶದಲ್ಲಿ ಮತ್ತು ಮರಳು ಗಣಿ ಗುತ್ತಿಗೆ ಸಂಬಂಧ 343 ಗುತ್ತಿಗೆಗಳನ್ನು 3773.39 ಎಕರೆ ಪ್ರದೇಶದಲ್ಲಿ ಮಂಜೂರು ಮಾಡಲಾಗಿರುತ್ತದೆ.<br><br>ಮುಖ್ಯ ಖನಿಜಗಳಿಗೆ ಸಂಬಂಧಿಸಿದಂತೆ, 2015ರ ಪೂರ್ವದಲ್ಲಿ ಸ್ವೀಕೃತಗೊಂಡ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಅರ್ಜಿದಾರರು ಶಾಸನ ಬದ್ಧ ತೀರುವಳಿಗಳನ್ನು ಸಲ್ಲಿಸಿದ ನಂತರ ಗಣಿ ಗುತ್ತಿಗೆಗಳನ್ನು ಮಂಜೂರು ಮಾಡಲಾಗುತ್ತಿತ್ತು.<br><br>MMDR ನ ಸೆಕ್ಷನ್ 17A ರನ್ವಯ ಕೇಂದ್ರ ಮತ್ತು ರಾಜ್ಯ ಸರ್ಕಾರಿ ಸೌಮ್ಯದ ಸಂಸ್ಥೆಗಳಿಗೆ ಗಣಿಗುತ್ತಿಗೆಗಳನ್ನು ಹರಾಜು ರಹಿತವಾಗಿ ಮಂಜೂರು ಮಾಡಲಾಗುತ್ತಿದೆ.<br><br>2015 ಮತ್ತು 2021ರ ಎಂ.ಎಂ. (ಡಿ&ಆರ್) ತಿದ್ದುಪಡಿ ಕಾಯ್ದೆ ಜಾರಿಯಾದ ನಂತರ ಗಣಿ ಗುತ್ತಿಗೆಗಳನ್ನು ಹರಾಜು ಮೂಲಕವೇ ಮಂಜೂರಾತಿ ನೀಡಲಾಗುತ್ತಿದೆ.<br><br>ರಾಜ್ಯ ಸರ್ಕಾರವು ದಿ:12-08-2016 ರಂದು ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು-2016ನ್ನು ಜಾರಿಗೆ ತಂದಿರುತ್ತದೆ. ಸದರಿ ನಿಯಮಗಳಂತೆ ಸರ್ಕಾರಿ ಜಮೀನುಗಳಲ್ಲಿ ಲಭ್ಯವಿರುವ ಉಪಖನಿಜ ನಿಕ್ಷೇಪಗಳನ್ನು ಹರಾಜು ಮೂಲಕ ಮಂಜೂರು ಮಾಡಬೇಕಾಗಿರುತ್ತದೆ.<br><br>ಪಟ್ಟಾ ಜಮೀನುಗಳಲ್ಲಿ ಲಭ್ಯವಿರುವ ಖನಿಜವನ್ನು ತೆಗೆಯಲು ಪಟ್ಟಾದಾರರಿಗೆ ಅಥವಾ ಪಟ್ಟಾದಾರರು ಒಪ್ಪಿಗೆ ನೀಡುವ ವ್ಯಕ್ತಿಗಳಿಗೆ ಕಂದಾಯ ಮತ್ತು ಅರಣ್ಯ ಇಲಾಖೆ ನಿರಾಕ್ಷೇಪಣಾ ಪತ್ರ, ಭೂಪರಿವರ್ತನೆ ಆದೇಶ ಮತ್ತು ಪರಿಸರ ಅನುಮತಿ ಪತ್ರ ಪಡೆದು ಕಲ್ಲುಗಣಿಗಾರಿಕೆಗೆ ಲೈಸೆನ್ಸ್ ನೀಡಲಾಗುತ್ತಿದೆ.<br><br>ಗಣಿ/ಕಲ್ಲುಗಣಿ ಗುತ್ತಿಗೆಗಳನ್ನು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಮೂನೆ-ಇ ರಲ್ಲಿನ ಗುತ್ತಿಗೆ ಕರಾರು, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರದಲ್ಲಿನ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ನೀಡಲಾಗಿರುತ್ತದೆ. |
| ಆ) | ರಾಜ್ಯದಲ್ಲಿ ಅನಧಿಕೃತ ಗಣಿ ಚಟುವಟಿಕೆಗಳು ಅವ್ಯಾಹತವಾಗಿ ನಡೆಯುತ್ತಿದ್ದು, ಈ ಅನಧಿಕೃತ ಗಣಿಗಾರಿಕೆಗಳನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡಿರುವ ಪರಿಣಾಮಕಾರಿ ಕ್ರಮಗಳೇನು; | ಅಕ್ರಮ ಗಣಿಗಾರಿಕೆಯನ್ನು ತಡೆಗಟ್ಟಲು ಇಲಾಖೆಯಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಐ 21 ಎಂಎಂಎನ್ (2) 2014 ದಿನಾಂಕ: 21-01-2014 ರಂತೆ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ 1957ರ ಕಲಂ 21 ಮತ್ತು 22ರಡಿ ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮ-43 ಮತ್ತು 46ರಂತೆ |

ಅನಧಿಕೃತ ಗಣಿಗಾರಿಕೆ, ಸಾಗಾಣಿಕೆ ಮತ್ತು ದಾಸ್ತಾನು ವಿರುದ್ಧ ಕ್ರಮವಹಿಸಲು, ಕಂದಾಯ, ಅರಣ್ಯ ಪೋಲೀಸ್ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳಿಗೆ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ.

2. ಗಣಿ ಮತ್ತು ಭೂವಿಜ್ಞಾನ ಇಲಾಖೆಯಲ್ಲಿ ಖನಿಜಗಳ ಗಣಿಗಾರಿಕೆಗಾಗಿ ಗಣಿ ಗುತ್ತಿಗೆಗಳನ್ನು ಪಾರದರ್ಶಕವಾಗಿ ಹರಾಜು ಮೂಲಕ ಮಂಜೂರು ಮಾಡಲಾಗುತ್ತಿದೆ.
3. ಇಲಾಖೆಯಿಂದ ರಾಜ್ಯದಲ್ಲಿ ಮಂಜೂರು ಮಾಡಿರುವ ಕಲ್ಲು ಗಣಿಗುತ್ತಿಗೆ ಪ್ರದೇಶಗಳಲ್ಲಿ ಹಾಗೂ ಕಲ್ಲು ಗಣಿಗುತ್ತಿಗೆ ಪ್ರದೇಶವನ್ನು ಒತ್ತುವರಿ ಮಾಡಿ ನಿಯಮ ಉಲ್ಲಂಘಿಸಿ ಸಂಚಿತ ಆಡಿಟ್ ಪ್ರಮಾಣಕ್ಕಿಂತ ಅಧಿಕವಾಗಿ ಉಪಖನಿಜವನ್ನು ಉತ್ಪಾದಿಸಿ, ಸಾಗಾಣಿಕೆ ಮಾಡಿರುವುದನ್ನು ಕರ್ನಾಟಕ ರಾಜ್ಯ ದೂರ ಸಂವೇದಿ ಕೇಂದ್ರ (KSRSAC) ರವರಿಂದ ಕಲ್ಲುಗಣಿ ಗುತ್ತಿಗೆ ಪ್ರದೇಶಗಳ ಡ್ರೋಣ್/ ಡಿ.ಜಿ.ಪಿ.ಎಸ್ ಸರ್ವೆ ಕೈಗೊಂಡು ಮೂಲ ಖನಿಜ ಉತ್ಪಾದನಾ ಸ್ಥಳದಲ್ಲಿ ರಾಜಧನ ಸೋರಿಕೆ ತಡೆಗಟ್ಟಲು ಕ್ರಮವಹಿಲಾಗುತ್ತಿದೆ.
4. Integrated Lease Management System (ILMS) version-II ಜಾರಿಗೊಳಿಸಲಾಗುತ್ತಿದ್ದು, ಅನಧಿಕೃತ ಖನಿಜ ಸಾಗಾಣಿಕೆಯನ್ನು ತಡೆಗಟ್ಟಲು ಖನಿಜ ಸಾಗಾಣಿಕಾ ವಾಹನಗಳಿಗೆ GPS ಅಳವಡಿಸಿ ಕೇಂದ್ರೀಕೃತವಾಗಿ ನಿಗಾವಹಿಸಲು ತಂತ್ರಾಂಶ ರೂಪಿಸಲಾಗುತ್ತಿದೆ.
5. ಅನಧಿಕೃತ ಖನಿಜ ಸಾಗಾಣಿಕೆಯನ್ನು ಪತ್ತೆ ಹಚ್ಚಲು ಖನಿಜ ರವಾನೆ ಪರವಾನಿಗೆ ಕಡ್ಡಾಯಗೊಳಿಸಲಾಗಿದ್ದು, ಖನಿಜ ರವಾನೆ ಪರವಾನಿಗೆ ವಿಶೇಷ ರಕ್ಷಣಾತ್ಮಕ ಹಾಳೆಯಲ್ಲಿ ವಿತರಿಸಲಾಗುತ್ತಿದೆ.
6. ಮಂಜೂರಾದ ಗಣಿ/ಕಲ್ಲುಗಣಿ ಗುತ್ತಿಗೆ ಪ್ರದೇಶಗಳನ್ನು ಹೊರತುಪಡಿಸಿ ಗುತ್ತಿಗೆ ಪ್ರದೇಶದ ಹೊರಭಾಗದಲ್ಲಿ ಒತ್ತುವರಿ ಮಾಡಿ ಗಣಿಗಾರಿಕೆಯನ್ನು ನಡೆಸುವುದನ್ನು ತಡೆಗಟ್ಟಲು Geo-fencing ಅಳವಡಿಸಿ ನಿರ್ವಹಿಸಲು ಕ್ರಮಕೈಗೊಳ್ಳಲಾಗುತ್ತಿದೆ.
7. ಅನಧಿಕೃತ ಗಣಿಗಾರಿಕೆಯನ್ನು ತಡೆಗಟ್ಟಲು ಖನಿಜ ರಕ್ಷಣಾ ಪಡೆ ಸ್ಥಾಪಿಸಲು ಕ್ರಮಕೈಗೊಳ್ಳಲಾಗುತ್ತಿದೆ.
8. ಅನಧಿಕೃತ ಕಲ್ಲು ಗಣಿಗಾರಿಕೆ/ಸಾಗಾಣಿಕೆಯನ್ನು ನಿಯಂತ್ರಿಸಲು ಜಿಲ್ಲಾ ಟಾಸ್ಕ್ ಪೋರ್ಸ್ (ಗಣಿ) ಸಮಿತಿಯಿಂದ ರಾಜ್ಯದಲ್ಲಿ ಆಯಾಕಟ್ಟಿನ ಪ್ರದೇಶಗಳಲ್ಲಿ ತನಿಖಾ ಠಾಣೆಗಳನ್ನು ತೆರೆದು ಕಾರ್ಯ ನಿರ್ವಹಿಸಲಾಗುತ್ತಿದೆ. ಅಲ್ಲದೆ ಆಯಾ ಜಿಲ್ಲಾ ವ್ಯಾಪ್ತಿಗಳಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಚಾಲಿತ ದಳವನ್ನು ರಚಿಸಿಕೊಂಡು ಅನಧಿಕೃತ ಕಲ್ಲು ಗಣಿಗಾರಿಕೆ/ ಸಾಗಾಣಿಕೆಯನ್ನು ನಿಯಂತ್ರಿಸಲಾಗುತ್ತಿದೆ.

ಅದರಂತೆ, ಕಳೆದ 03 ವರ್ಷಗಳಲ್ಲಿ ಅನಧಿಕೃತ ಖನಿಜ ಗಣಿಗಾರಿಕೆ ಸಂಬಂಧ ಕೈಗೊಂಡ ಕ್ರಮದ ವಿವರ ಕೆಳಕಂಡಂತಿದೆ:

**ಮುಖ್ಯ ಖನಿಜ ಗಣಿಗಾರಿಕೆ:-**

| ಕ್ರ. ಸಂ. | ವರ್ಷ | ಪತ್ತೆಹಚ್ಚಿದ ಪ್ರಕರಣಗಳ ಸಂಖ್ಯೆ | ವಿಧಿಸಿದ ದಂಡ (ರೂ.ಲಕ್ಷಗಳಲ್ಲಿ) | ದಾಖಲಿಸಿರುವ ಮೊಕದ್ದಮೆಗಳು |
|---|---|---|---|---|
| 1. | 2019-20 | 08 | 0.15 | 07 |
| 2. | 2020-21 | 04 | 8.00 | - |
| 3. | 2021-22 | 10 | - | 10 |
| ಒಟ್ಟು | | **22** | **8.15** | **17** |

ಕಲ್ಲುಗಣಿಗಾರಿಕೆ:-

| ಕ್ರ. ಸಂ. | ವರ್ಷ | ಪತ್ತೆಹಚ್ಚಿದ ಪ್ರಕರಣಗಳ ಸಂಖ್ಯೆ | ವಿಧಿಸಿದ ದಂಡ (ರೂ.ಲಕ್ಷಗಳಲ್ಲಿ) | ದಾಖಲಿಸಿರುವ ಮೊಕದ್ದಮೆಗಳು |
|---|---|---|---|---|
| 1. | 2019-20 | 266 | 908.70 | 117 |
| 2. | 2020-21 | 555 | 1576.62 | 149 |

| | | | | |
|---|---|---|---|---|
| 3. | 2021-22 | 153 | 292.58 | 47 |
| | **ಒಟ್ಟು** | **974** | **2777.9** | **313** |

**ಮರಳು ಗಣಿಗಾರಿಕೆ:-**

| **ಕ್ರ. ಸಂ.** | **ವರ್ಷ** | **ಪತ್ತೆಹಚ್ಚಿದ ಪ್ರಕರಣಗಳ ಸಂಖ್ಯೆ** | **ವಿಧಿಸಿದ ದಂಡ (ರೂ.ಲಕ್ಷಗಳಲ್ಲಿ)** | **ದಾಖಲಿಸಿರುವ ಮೊಕದ್ದಮೆಗಳು** |
|---|---|---|---|---|
| 1. | 2019-20 | 240 | 128.81 | 106 |
| 2. | 2020-21 | 293 | 82.55 | 72 |
| 3. | 2021-22 | 140 | 50.08 | 67 |
| | **ಒಟ್ಟು** | **673** | **261.44** | **245** |

ಇ) ಮಂಜೂರಾದ ಗಣಿ/ಕಲ್ಲುಗಣಿ ಗುತ್ತಿಗೆ ಪ್ರದೇಶಗಳನ್ನು ಹೊರತುಪಡಿಸಿ, ಗುತ್ತಿಗೆ ಪ್ರದೇಶದ ಹೊರಭಾಗದಲ್ಲಿ ಒತ್ತುವರಿ ಮಾಡಿ ನಿಯಮ ಉಲ್ಲಂಘಿಸಿ ಗಣಿಗಾರಿಕೆಯನ್ನು ನಡೆಸುವುದನ್ನು ತಡೆಗಟ್ಟಲು ಕೈಗೊಂಡಿರುವ ಪರಿಣಾಮಕಾರಿ ಕ್ರಮಗಳೇನು;

- ಗುತ್ತಿಗೆ ಪ್ರದೇಶವನ್ನು ಒತ್ತುವರಿ ಮಾಡಿ ಗಣಿಗಾರಿಕೆ ಮಾಡಿರುವ ಪ್ರಕರಣಗಳಲ್ಲಿ ಆಗಿಂದ್ದಾಗ್ಗೆ ಸ್ಥಳ ಪರಿಶೀಲನೆ ನಡೆಸಿ ಗುತ್ತಿಗೆದಾರರ ವಿರುದ್ಧ ನಿಯಮಾನುಸಾರ ಕ್ರಮಕೈಗೊಳ್ಳಲಾಗುತ್ತಿದೆ.
- ಮುಖ್ಯ ಖನಿಜಗಳ ಗಣಿ ಗುತ್ತಿಗೆಗಳಿಗೆ ಸಂಬಂಧಿಸಿದಂತೆ, ಭಾರತ ಸರ್ಕಾರವು ಎಂ.ಸಿ.ಡಿ.ಆರ್ ಕಾಯ್ದೆಗೆ ದಿ:03-11-2021 ರಂದು ತಿದ್ದುಪಡಿ ತಂದಿದ್ದು, ಅದರಂತೆ, 50 ಹೆಕ್ಟೇರ್ ಪ್ರದೇಶಕ್ಕಿಂತ ಹೆಚ್ಚಿನ ಅಥವಾ ಒಂದು ಮಿಲಿಯನ್ ಟನ್ ಉತ್ಪಾದನೆ ಸಾಮರ್ಥ್ಯ ಇರುವ ಗಣಿ ಗುತ್ತಿಗೆದಾರರು ಕಡ್ಡಾಯವಾಗಿ ಪ್ರತಿ ವರ್ಷ ಡ್ರೋಣ್ ಸರ್ವೆ ಕಾರ್ಯ ಕೈಗೊಂಡು ಪ್ರತಿ ವರ್ಷದ ಏಪ್ರಿಲ್ ಅಥವಾ ಮೇ ತಿಂಗಳ ಒಳಗೆ ಸಂಸ್ಕರಿಸಿದ ಹಾಗೂ ಕಚ್ಚಾ ದತ್ತಾಂಶವನ್ನು ಭಾರತೀಯ ಗಣಿ ನಿಯಂತ್ರಣ ಬ್ಯೂರೋಗೆ ಸಲ್ಲಿಸಬೇಕಾಗಿರುತ್ತದೆ ಮತ್ತು 50 ಹೆಕ್ಟೇರ್ ಪ್ರದೇಶಕ್ಕಿಂತ ಕಡಿಮೆ ಅಥವಾ ಒಂದು ಮಿಲಿಯನ್ ಟನ್ ಉತ್ಪಾದನೆ ಸಾಮರ್ಥ್ಯ ಕ್ಕಿಂತ ಕಡಿಮೆ ಇರುವ ಗಣಿ ಗುತ್ತಿಗೆದಾರರು ಕಡ್ಡಾಯವಾಗಿ ಪ್ರತಿ ವರ್ಷ High resolution geo referenced ortho rectified multispectral satellite image of the leased area and upto 100meter outside the lease boundary ಅನ್ನು ಡ್ರೋಣ್ ಸರ್ವೆ ಕಾರ್ಯ ಕೈಗೊಂಡು ಪ್ರತಿ ವರ್ಷದ ಏಪ್ರಿಲ್ ರಿಂದ ಜೂನ್ ತಿಂಗಳ ಒಳಗೆ ಭಾರತೀಯ ಗಣಿ ನಿಯಂತ್ರಣ ಬ್ಯೂರೋಗೆ ಸಲ್ಲಿಸಬೇಕಾಗಿರುತ್ತದೆ. ಇದರಿಂದ ಗಣಿ ಗುತ್ತಿಗೆದಾರರು ಒತ್ತುವರಿ ಮಾಡಿದಲ್ಲಿ ಪರಿಣಾಮಕಾರಿಯಾಗಿ ಪತ್ತೆಹಚ್ಚಲು ಸಹಕಾರಿಯಾಗುತ್ತದೆ.
- ಉಪಖನಿಜ ಗಣಿ ಗುತ್ತಿಗೆ ಪ್ರದೇಶದ ಒತ್ತುವರಿಯನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಹಾಗೂ ಪತ್ತೆಹಚ್ಚಲು ಮಂಜೂರಾದ ಗಣಿ/ಕಲ್ಲುಗಣಿ ಗುತ್ತಿಗೆ ಪ್ರದೇಶಗಳನ್ನು Geo-fencing ತಂತ್ರಾಂಶವನ್ನು ಅಳವಡಿಸಲು ಕ್ರಮಕೈಗೊಳ್ಳಲಾಗುತ್ತಿದೆ.
- ಮುಂದುವರೆದು, ಇಲಾಖೆಯಿಂದ ರಾಜ್ಯದಲ್ಲಿ ಮಂಜೂರು ಮಾಡಿರುವ ಕಲ್ಲು ಗಣಿಗುತ್ತಿಗೆ ಪ್ರದೇಶಗಳಲ್ಲಿ ಹಾಗೂ ಕಲ್ಲು ಗಣಿಗುತ್ತಿಗೆ ಪ್ರದೇಶವನ್ನು ಒತ್ತುವರಿ ಮಾಡಿ ನಿಯಮ ಉಲ್ಲಂಘಿಸಿ ಸಂಚಿತ ಆಡಿಟ್ ಪ್ರಮಾಣಕ್ಕಿಂತ ಅಧಿಕವಾಗಿ ಉಪಖನಿಜವನ್ನು ಉತ್ಪಾದಿಸಿ, ಸಾಗಾಣಿಕೆ ಮಾಡಿರುವುದನ್ನು ಕರ್ನಾಟಕ ರಾಜ್ಯ ದೂರ ಸಂವೇದಿ ಕೇಂದ್ರ (KSRSAC) ರವರಿಂದ ಕಲ್ಲುಗಣಿ ಗುತ್ತಿಗೆ ಪ್ರದೇಶಗಳ ಡ್ರೋಣ್/ ಡಿ.ಜಿ.ಪಿ.ಎಸ್ ಸರ್ವೆ ಕೈಗೊಂಡು ಮೂಲ ಖನಿಜ ಉತ್ಪಾದನಾ ಸ್ಥಳದಲ್ಲಿ ರಾಜಧನ ಸೋರಿಕೆ ತಡೆಗಟ್ಟಲು ಕ್ರಮವಹಿಲಾಗುತ್ತಿದೆ.
- ಕಲ್ಲುಗಣಿ ಗುತ್ತಿಗೆ ಪ್ರದೇಶದಲ್ಲಿ ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರದನುಸಾರ 7.5 ಮೀಟರ್ ಮಾರ್ಜಿನ್

ಪ್ರದೇಶವನ್ನು ಕಾಯ್ದಿರಿಸಿಕೊಂಡು ಗಣಿಗಾರಿಕೆ ನಡೆಸುವುದನ್ನು ಕಡ್ಡಾಯಗೊಳಿಸಲಾಗಿರುತ್ತದೆ.

ಈ) ಕಳೆದ 10 ವರ್ಷಗಳಲ್ಲಿ ಗಣಿಗಾರಿಕೆಯಿಂದ ಸರ್ಕಾರಕ್ಕೆ ಬಂದಂತಹ ರಾಜಧನ ಎಷ್ಟು; ರಾಜಧನ ಸೋರಿಕೆಯನ್ನು ತಡೆಗಟ್ಟಲು ತೆಗೆದುಕೊಂಡ ಪರಿಣಾಮಕಾರಿ ಕ್ರಮಗಳೇನು; (ವಿವರಗಳನ್ನು ನೀಡುವುದು)

ಕಳೆದ 10 ವರ್ಷಗಳಲ್ಲಿ ಗಣಿಗಾರಿಕೆಯಿಂದ ಸರ್ಕಾರಕ್ಕೆ ಬಂದಿರುವ ರಾಜಧನದ ವಿವರ ಈ ಕೆಳಗಿನಂತಿದೆ.

| ಕ್ರ. ಸಂ. | ವರ್ಷ | ರಾಜಧನ ಸಂಗ್ರಹಣೆ (ರೂ. ಕೋಟಿಗಳಲ್ಲಿ) |
|---|---|---|
| 1 | 2012-13 | 1485.48 |
| 2 | 2013-14 | 1474.49 |
| 3 | 2014-15 | 1931.10 |
| 4 | 2015-16 | 2003.79 |
| 5 | 2016-17 | 2419.43 |
| 6 | 2017-18 | 2746.26 |
| 7 | 2018-19 | 3026.42 |
| 8 | 2019-20 | 3629.02 |
| 9 | 2020-21 | 3893.44 |
| 10 | 2021-22 | 6308.31 |

**ಗಣಿ ಮತ್ತು ಭೂವಿಜ್ಞಾನ ಇಲಾಖೆಯಲ್ಲಿ ರಾಜಧನ ಸೋರಿಕೆಯನ್ನು ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.**

1. ಗಣಿ ಮತ್ತು ಭೂವಿಜ್ಞಾನ ಇಲಾಖೆಯಲ್ಲಿ ಖನಿಜಗಳ ಗಣಿಗಾರಿಕೆಗಾಗಿ ಗಣಿ ಗುತ್ತಿಗೆಗಳನ್ನು ಪಾರದರ್ಶಕವಾಗಿ ಹರಾಜು ಮೂಲಕ ಮಂಜೂರು ಮಾಡಲಾಗುತ್ತಿದೆ.
2. ಇಲಾಖೆಯಿಂದ ರಾಜ್ಯದಲ್ಲಿ ಮಂಜೂರು ಮಾಡಿರುವ ಕಲ್ಲು ಗಣಿಗುತ್ತಿಗೆ ಪ್ರದೇಶಗಳಲ್ಲಿ ಹಾಗೂ ಕಲ್ಲು ಗಣಿಗುತ್ತಿಗೆ ಪ್ರದೇಶವನ್ನು ಒತ್ತುವರಿ ಮಾಡಿ ನಿಯಮ ಉಲ್ಲಂಘಿಸಿ ಸಂಚಿತ ಆಡಿಟ್ ಪ್ರಮಾಣಕ್ಕಿಂತ ಅಧಿಕವಾಗಿ ಉಪಖನಿಜವನ್ನು ಉತ್ಪಾದಿಸಿ, ಸಾಗಾಣಿಕೆ ಮಾಡಿರುವುದನ್ನು ಕರ್ನಾಟಕ ರಾಜ್ಯ ದೂರ ಸಂವೇದಿ ಕೇಂದ್ರ (KSRSAC) ರವರಿಂದ ಕಲ್ಲುಗಣಿ ಗುತ್ತಿಗೆ ಪ್ರದೇಶಗಳ ಡ್ರೋಣ್/ ಡಿ.ಜಿ.ಪಿ.ಎಸ್ ಸರ್ವೆ ಕೈಗೊಂಡು ಮೂಲ ಖನಿಜ ಉತ್ಪಾದನಾ ಸ್ಥಳದಲ್ಲಿ ರಾಜಧನ ಸೋರಿಕೆ ತಡೆಗಟ್ಟಲು ಕ್ರಮವಹಿಲಾಗುತ್ತಿದೆ.
3. Integrated Lease Management System (ILMS) version-II ಜಾರಿಗೊಳಿಸಲಾಗುತ್ತಿದ್ದು, ಅನಧಿಕೃತ ಖನಿಜ ಸಾಗಾಣಿಕೆಯನ್ನು ತಡೆಗಟ್ಟಲು ಖನಿಜ ಸಾಗಾಣಿಕಾ ವಾಹನಗಳಿಗೆ GPS ಅಳವಡಿಸಿ ಕೇಂದ್ರೀಕೃತವಾಗಿ ನಿಗಾವಹಿಸಲು ತಂತ್ರಾಂಶ ರೂಪಿಸಲಾಗುತ್ತಿದೆ.
4. ಅನಧಿಕೃತ ಖನಿಜ ಸಾಗಾಣಿಕೆಯನ್ನು ಪತ್ತೆ ಹಚ್ಚಲು ಖನಿಜ ರವಾನೆ ಪರವಾನಿಗೆ ಕಡ್ಡಾಯಗೊಳಿಸಲಾಗಿದ್ದು, ಖನಿಜ ರವಾನೆ ಪರವಾನಿಗೆ ವಿಶೇಷ ರಕ್ಷಣಾತ್ಮಕ ಹಾಳೆಯಲ್ಲಿ ವಿತರಿಸಲಾಗುತ್ತಿದೆ.
5. ಮಂಜೂರಾದ ಗಣಿ/ಕಲ್ಲುಗಣಿ ಗುತ್ತಿಗೆ ಪ್ರದೇಶಗಳನ್ನು ಹೊರತುಪಡಿಸಿ ಗುತ್ತಿಗೆ ಪ್ರದೇಶದ ಹೊರಭಾಗದಲ್ಲಿ ಒತ್ತುವರಿ ಮಾಡಿ ಗಣಿಗಾರಿಕೆಯನ್ನು ನಡೆಸುವುದನ್ನು ತಡೆಗಟ್ಟಲು Geo-fencing ಅಳವಡಿಸಿ ನಿರ್ವಹಿಸಲು ಕ್ರಮಕೈಗೊಳ್ಳಲಾಗುತ್ತಿದೆ.

| | | |
|---|---|---|
| | | 6. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಐ 21 ಎಂಎಂಎನ್ (2) 2014 ದಿನಾಂಕ: 21-01-2014 ರಂತೆ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ 1957ರ ಕಲಂ 21 ಮತ್ತು 22ರಡಿ ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು-1994ರ ನಿಯಮ-43 ಮತ್ತು 46ರಂತೆ ಅನಧಿಕೃತ ಗಣಿಗಾರಿಕೆ, ಸಾಗಾಣಿಕೆ ಮತ್ತು ದಾಸ್ತಾನು ವಿರುದ್ಧ ಕ್ರಮವಹಿಸಲು, ಕಂದಾಯ, ಅರಣ್ಯ ಪೋಲೀಸ್ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳಿಗೆ ಅಧಿಕಾರವನ್ನು ಪ್ರತ್ಯಾಯೋಜಿಸಲಾಗಿದೆ.<br>7. ಅನಧಿಕೃತ ಗಣಿಗಾರಿಕೆಯನ್ನು ತಡೆಗಟ್ಟಲು ಖನಿಜ ರಕ್ಷಣಾ ಪಡೆ ಸ್ಥಾಪಿಸಲು ಕ್ರಮಕೈಗೊಳ್ಳಲಾಗುತ್ತಿದೆ.<br>8. ಅನಧಿಕೃತ ಕಲ್ಲು ಗಣಿಗಾರಿಕೆ/ಸಾಗಾಣಿಕೆಯನ್ನು ನಿಯಂತ್ರಿಸಲು ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯಿಂದ ರಾಜ್ಯದಲ್ಲಿ ಆಯಾಕಟ್ಟಿನ ಪ್ರದೇಶಗಳಲ್ಲಿ ತನಿಖಾ ಠಾಣೆಗಳನ್ನು ತೆರೆದು ಕಾರ್ಯ ನಿರ್ವಹಿಸಲಾಗುತ್ತಿದೆ. ಅಲ್ಲದೆ ಆಯಾ ಜಿಲ್ಲಾ ವ್ಯಾಪ್ತಿಗಳಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಚಾಲಿತ ದಳವನ್ನು ರಚಿಸಿಕೊಂಡು ಅನಧಿಕೃತ ಕಲ್ಲು ಗಣಿಗಾರಿಕೆ/ ಸಾಗಾಣಿಕೆಯನ್ನು ನಿಯಂತ್ರಿಸಲಾಗುತ್ತಿದೆ.<br>9. ಅನಧಿಕೃತವಾಗಿ ಗಣಿ/ಕಲ್ಲುಗಣಿಗಾರಿಕೆ ನಡೆಸುವವರ ವಿರುದ್ಧ ಎಂ.ಎಂ.ಡಿ & ಆರ್-1957 ಹಾಗೂ ಕೆ.ಎಂ.ಎಂ.ಸಿ.ಆರ್-1994ರ ನಿಯಮಗಳಂತೆ ಮೊಕದ್ದಮೆಗಳನ್ನು ದಾಖಲಿಸಲು ಹಾಗೂ ದಂಡ ವಿಧಿಸಿ ಸಂಗ್ರಹಿಸಲು ಕ್ರಮವಹಿಸಲಾಗುತ್ತಿದ್ದು, ರಾಜಧನ ಸೋರಿಕೆ ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮವಹಿಸಲಾಗುತ್ತಿದೆ. |
| ಉ) | ಕಳೆದ ಐದು ವರ್ಷಗಳಲ್ಲಿ ಮಂಜೂರಾದ ಗುತ್ತಿಗೆಗಳಲ್ಲಿ ಎಷ್ಟು ಗುತ್ತಿಗೆಗಳ ಲೆಕ್ಕಪರಿಶೋಧನೆ ನಡೆದಿದೆ; ಇನ್ನು ಎಷ್ಟು ಗುತ್ತಿಗೆಗಳ ಲೆಕ್ಕಪರಿಶೋಧನೆ ಬಾಕಿ ಇದೆ; ಈ ಲೆಕ್ಕಪರಿಶೋಧನೆಯ ಫಲಶೃತಿ ಏನು? (ವಿವರಗಳೊಂದಿಗೆ ಮಾಹಿತಿ ನೀಡುವುದು) | ಕಳೆದ ಐದು ವರ್ಷಗಳಿಂದ ಮಂಜೂರಾದ ಎಲ್ಲಾ ಗುತ್ತಿಗೆಗಳನ್ನು ಎಂ.ಎಂ.(ಡಿ&ಆರ್) ಕಾಯ್ದೆ ಮತ್ತು KMMCR 1994 ರಲ್ಲಿ ನಿಗಧಿಪಡಿಸಿರುವಂತೆ, ಇಲಾಖೆಯ ತಾಂತ್ರಿಕ ಅಧಿಕಾರಿಗಳು ಗುತ್ತಿಗೆ ಪ್ರದೇಶಗಳ ಸ್ಥಳ ತನಿಖೆ ನಡೆಸಿ, ಗುತ್ತಿಗೆ ಪ್ರದೇಶದಲ್ಲಿ ತೆಗೆದಿರುವ ಖನಿಜ ಪ್ರಮಾಣವನ್ನು ಅಂದಾಜಿಸುವುದು, ಗುತ್ತಿಗೆ ಪ್ರದೇಶಗಳಲ್ಲಿ ಕರಾರು ದಸ್ತಾವೇಜಿನ ಷರತ್ತು ಮತ್ತು ನಿಬಂಧನೆಗಳನುಸಾರ ಗಣಿ ಕಾರ್ಯ ನಡೆಸುತ್ತಿರುವ ಬಗ್ಗೆ ಹಾಗೂ ಗಣಿಗಾರಿಕೆ ಸ್ಥಿತಿ-ಗತಿ ಸಂಬಂಧಿಸಿದಂತೆ ವರದಿ ಸಲ್ಲಿಸುತ್ತಾರೆ. ಸದರಿ ವರದಿಯನುಸಾರ ವಾರ್ಷಿಕ ಲೆಕ್ಕಪರಿಶೋಧನೆ ವರದಿಯನ್ನು ಸಿದ್ಧಪಡಿಸಲಾಗುತ್ತದೆ. ಗುತ್ತಿಗೆದಾರರು ಗುತ್ತಿಗೆ ಪ್ರದೇಶದಲ್ಲಿ ತೆಗೆದು ಸಾಗಾಣಿಕೆ ಮಾಡಿರುವ ಖನಿಜಕ್ಕೆ ಸಂದಾಯಿಸಬೇಕಾದ ರಾಜಧನ/ಸ್ಥಿರಬಾಡಿಗೆ ಬೇಡಿಕೆ ಪತ್ರವನ್ನು ಜಾರಿಗೊಳಿಸಿ ರಾಜಧನ/ಬಾಕಿ/ದಂಡ ಮೊತ್ತ ವಸೂಲಾತಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ: ಸಿಐ 169 ಎಂಎಂಎಂ 2022**

Halappa
**(ಆಚಾರ್ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು